ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎ. ರವೀಂದ್ರನಾಥ್ (ತೋಟಗಾರಿಕೆ ಮತ್ತು ಸಕ್ಕರೆ ಸಚಿವರು) : ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಯಿತು.

ಅನುಬಂಧ – VII

ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕ, 2011

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

2011ನೇ ಸಾಲಿನ ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ – VIII

(ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪರ್ಯಾಲೋಚನಾ ಪ್ರಸ್ತಾವ

(1) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ತಿದ್ದುಪಡಿ) ವಿಧೇಯಕ, 2011

ಶ್ರೀ ಲಕ್ಷ್ಮಣ ಎಸ್. ಸವದಿ (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ಮಾಡುವ ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದಿದೆ.